ಎಂ ವಿ ಸಿ ನಂ. 107/2020

ಪಿ ಡಬ್ಲ್ಯೂ: 1

ದಿನಾಂಕ 06-11-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ: ಅರ್ಜಿದಾರರ ಪರ: ಶ್ರೀ ಸಿ ವಿ ಎಸ್ ವಕೀಲರಿಂದ:

ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-21 ಎಂದು, ಕೇಸ್ ಶೀಟನ್ನುಸಂಪೂರ್ಣ ಕಡತಗಳೊಂದಿಗೆ ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ಅದನ್ನು ನಿಪಿ-22 ಎಂದು ಗುರುತಿಸಲಾಯಿತು.

ಮುಂದುವರೆದ ಪಾಟೀ ಸವಾಲು: **3** ನೇ ಎದುರುದಾರರ ಪರ: ಶ್ರೀ ಕೆ ಎ ವಕೀಲರಿಂದ:

ವೆನ್ಲಾಕ್ ಆಸ್ಪತ್ರೆಯಲ್ಲಿ ನನಗೆ ಅಪಘಾತದಿಂದ ಉಂಟಾದ ಗಾಯಗಳಿಗೆ ಯಾವುದೇ ಶಸ್ತ್ರ ಚಿಕಿತ್ಸೆ ಮಾಡಿರುವುದಿಲ್ಲ ಎಂದರೆ ಸಾಕ್ಷಿ ಶಸ್ತ್ರ ಚಿಕಿತ್ಸೆಯಾಗಿರುತ್ತದೆ ಎಂದು ನುಡಿಯುತ್ತಾರೆ. ವೆನ್ಲಾಕ್ ಆಸ್ಪತ್ರೆಯು ಸರ್ಕಾರಿ ಆಸ್ಪತ್ರೆಯಾಗಿದ್ದು, ಅಲ್ಲಿ ಚಿಕಿತ್ಸೆ ಮತ್ತು ಔಷಧಿಗಳು ಉಚಿತವಾಗಿ ಸಿಗುತ್ತವೆ ಎಂದರೆ ಸಾಕ್ಷಿ ಕೆಲವೊಂದು ಚಿಕಿತ್ಸೆ ಮತ್ತು ಔಷಧಿ ಉಚಿತವಾಗಿದ್ದು ಕೆಲವೊಂದನ್ನು ಹೊರಗಡೆಯಿಂದ ತರಬೇಕು ಎಂದು ನುಡಿಯುತ್ತಾರೆ. ವೆನ್ಲಾಕ್ ಆಸ್ಪತ್ರೆಯಲ್ಲಿ ನನ್ನ ಚಿಕಿತ್ಸೆಯ ಬಾಬ್ತು ಯಾವುದೇ ಹಣವನ್ನು ಪಡೆದಿರುವುದಿಲ್ಲ ಎಂದರೆ ಸರಿ. ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಚಿಕಿತ್ಸೆ ನೀಡಿದ ವೈದ್ಯರ ಹೆಸರು ನನಗೆ ಗೊತ್ತಿಲ್ಲ. ಸದರಿ ವೈದ್ಯರನ್ನು ಈ ಪ್ರಕರಣದಲ್ಲಿ ಸಾಕ್ಷ್ಯ ವಿಚಾರಣೆ ಮಾಡಿರುವುದಿಲ್ಲ ಎಂದರೆ ಸರಿ. ನಾನು ಚಿಕ್ಕಮಗಳೂರಿ ಕೆ ಪಿ ಹೆಬ್ಬಾರ್ ವೈದ್ಯರ ಬಳಿ ಚಿಕಿತ್ಸೆ ಪಡೆದಿರುತ್ತೇನೆ. ಆ ರೀತಿ ಕೆ ಪಿ ಹೆಬ್ಬಾರ್ ವೈದ್ಯರ ಬಳಿ ಚಿಕಿತ್ಸೆ ಪಡೆದ ಬಗ್ಗೆ ಯಾವುದೇ

ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸಾಕ್ಷಿ ಹಾಜರುಪಡಿಸಿದ್ದೇನೆ ಎಂದು ನುಡಿಯುತ್ತಾರೆ. ಕೆ ಪಿ ಹೆಬ್ಬಾರ್ ವೈದ್ಯರ ಬಳಿ ಸುಳ್ಳು ಅಂಗನ್ಯೂನ್ಯತಾ ಪ್ರಮಾಣ ಪತ್ರವನ್ನು ಪಡೆದು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಅಂಗನ್ಯೂನ್ಯತಾ ಪ್ರಮಾಣ ಪತ್ರದಲ್ಲಿ ಕಾಣಿಸಿರುವಂತೆ ನನಗೆ ಯಾವುದೇ ಅಂಗನ್ಯೂನ್ಯತೆ ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ, ಕಡೂರು.